ನವೆಂಬರ್-2020

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಪರಿಹಾರ parihara 9480985555

ಒಂದು ಹೆಜ್ಜೆ ಸ್ವಚ್ಛತೆಯ ಕಡೆಗೆ

# ಸ್ವಚ್ಛತಾವಾಣಿ

ವಾರ್ತಾಪತ್ರ

ಸ್ವಚ್ಛ ಸಂಕೀರ್ಣ

## “ನೂರು ದಿನಗಳ ವಿಶೇಷ ಆಂದೋಲನ”

ಕೇಂದ್ರ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಜಲ ಶಕ್ತಿ ಮಿಷನ್ ಭಾರತ ಸರ್ಕಾರವು “ಜಲ ಜೀವನ್ ಮಿಷನ್” ಯೋಜನೆಯಡಿ ರಾಜ್ಯದ **ಅಂಗನವಾಡಿ ಕೇಂದ್ರ, ಶಾಲೆ, ಆಶ್ರಮ ಶಾಲೆಗಳಿಗೆ** ಕಾರ್ಯಾತ್ಮಕ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲು ವಿಶೇಷ ನೂರು ದಿನಗಳ ಆಂದೋಲನವನ್ನು ಆಯೋಜಿಸಿದೆ. 2ನೇ ಅಕ್ಟೋಬರ್ 2020 ರಂದು ಈ ಆಂದೋಲನಕ್ಕೆ ಚಾಲನೆ ನೀಡಲಾಗಿದೆ. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಆರೋಗ್ಯ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ ಸೇರಿದಂತೆ ಇತರೆ ಸಂಬಂಧಿಸಿದ ಇಲಾಖೆಗಳ ಸಮನ್ವಯದೊಂದಿಗೆ ರಾಜ್ಯದ ಗ್ರಾಮೀಣ ಪ್ರದೇಶದ ಅಂಗನವಾಡಿ ಕೇಂದ್ರ, ಶಾಲೆ, ಗ್ರಾಮ ಪಂಚಾಯಿತಿ ಕಚೇರಿ, ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಭವನಗಳು, ಸಮುದಾಯ ಶೌಚಾಲಯಗಳಿಗೆ ಶುದ್ಧ, ಸುರಕ್ಷಿತ ಕುಡಿಯುವ ನೀರು ಒದಗಿಸುವ ಜೊತೆಗೆ ಶಾಲಾ ಮಕ್ಕಳಲ್ಲಿ ಉತ್ತಮ ನೈರ್ಮಲ್ಯ ಅಭ್ಯಾಸಗಳನ್ನು ರೂಢಿಸುವ ಧ್ಯೇಯೋದ್ದೇಶವನ್ನು ಈ ಆಂದೋಲನ ಒಳಗೊಂಡಿದೆ. ಈ ನಿಟ್ಟಿನಲ್ಲಿ ಈಗಾಗಲೇ ಕಾಯೋನ್ಮುಖವಾಗಿರುವ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಎಲ್ಲಾ ಜಿಲ್ಲೆಗಳಿಂದ ವರದಿಯನ್ನು ತರಿಸಿಕೊಳ್ಳುವ ಜೊತೆಗೆ, ಈ ಸಂಬಂಧ ಸಾರ್ವಜನಿಕರು ದೂರುಗಳನ್ನು ಸಲ್ಲಿಸಲು ಪರಿಹಾರ ಸಹಾಯವಾಣಿಯಲ್ಲಿ ಅವಕಾಶ ಮಾಡಿಕೊಡಲಾಗಿದೆ. ಹಾಗೂ ವಿವಿಧ ಸಾಮಾಜಿಕ ಮಾಧ್ಯಮಗಳಲ್ಲಿಯೂ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲಾಗುತ್ತಿದೆ.





## “ವಿಶ್ವ ಶೌಚಾಲಯ ದಿನ”




**“19ನೇ ನವೆಂಬರ್ ವಿಶ್ವ ಶೌಚಾಲಯ ದಿನ”**ವನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ ವಿಶೇಷವಾಗಿ ಆಚರಿಸಲಾಗಿದ್ದು, ಕೆಲ ಜಿಲ್ಲೆಗಳಲ್ಲಿ ಪ್ರತಿ ದಿನ ಪ್ರತಿ ಸಲ ಶೌಚಾಲಯವನ್ನು ಬಳಸದೇ ಇರುವವರನ್ನು ಗುರುತಿಸಿ ಅಂತಹವರಿಗೆ ಹಾರ ಹಾಕುವ ಮೂಲಕ ಜಾಗೃತಿ ಮೂಡಿಸಲಾಯಿತು. ಇನ್ನು ಕೆಲ ಜಿಲ್ಲೆಗಳಲ್ಲಿ ಜಾಥಾ ಮತ್ತು ಬೀದಿ ನಾಟಕ ಸೇರಿದಂತೆ ಹಲವು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು. ಜೊತೆಗೆ ಸಮುದಾಯ ಬಾನುಲಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುವ ಜಿಲ್ಲೆಗಳಲ್ಲಿ ವಿಶ್ವ ಶೌಚಾಲಯ ದಿನಾಚರಣೆ ಅಂಗವಾಗಿ ವಿಶೇಷ ಕಾರ್ಯಕ್ರಮವನ್ನು ಬಿತ್ತರಿಸಲಾಯಿತು. ಇದಿಷ್ಟೇ ಅಲ್ಲದೆ ದೂರದರ್ಶನ ಚಂದನ ವಾಹಿನಿಯಲ್ಲಿ ಮಾನ್ಯ ಆಯುಕ್ತರಾದ **ಡಾ.ವಿಶಾಲ್.ಆರ್‌ರವರು** ವಿಶ್ವ ಶೌಚಾಲಯ ದಿನದ ಅಂಗವಾಗಿ ನೇರ ಫೋನ್ ಇನ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೋತೃಗಳ ಪ್ರಶ್ನೆಗಳಿಗೆ ನೇರವಾಗಿ ಉತ್ತರಿಸಿದರು.

